# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 05-03-2021 ಪ್ರಶ್ನೆ ಸಂಖ್ಯೆ : 609 (759)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯಸಂಸ್ಥೆಗಳಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 05-03-2021

ಉತ್ತರಿಸುವ ಸಚಿವರು: ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು

ವಿಷಯ : ಚೈಲ್ಡ್ ಲೈನ್ ಸೇವೆ ಜಾರಿ ಕುರಿತು

(ಅ) ರಾಜ್ಯದಲ್ಲಿ ಮಕ್ಕಳ ರಕ್ಷಣೆ ಮತ್ತು ಸುರಕ್ಷತೆಗಾಗಿ ಜಾರಿಗೆ ತರಲಾಗಿರುವ ಯೋಜನೆಗಳ ಪೈಕಿ ಚೈಲ್ಡ್ ಲೈನ್ ಸೇವೆ ಜಾರಿಗೆ ತರುವಲ್ಲಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಚೈಲ್ಡ್ ಲೈನ್ 1098 ಸೇವೆ ಜಾರಿಯಲ್ಲಿದೆ ; (ವಿವರ ನೀಡುವುದು)

(ಇ) ಎಲ್ಲಾ ಜಿಲ್ಲೆಗಳಲ್ಲೂ ಸ್ಥಾಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಎಷ್ಟು ಜಿಲ್ಲೆಗಳಲ್ಲಿ ಚೈಲ್ಡ್ ಲೈನ್ 1098 ಸಲಹಾ ಸಮಿತಿ ರಚನೆಯಾಗಿದೆ ; ಅದರ ಕಾರ್ಯವಿಧಾನದ ಕುರಿತು ವಿವರ ನೀಡುವುದು ;

(ಉ) ಚೈಲ್ಡ್ ಲೈನ್ 1098 ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾರ್ಯಕ್ಕೂ ಇರುವ ಸಂಬಂಧವೇನು ? (ವಿವರ ನೀಡುವುದು)